# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ/104/ಗ್ರಾನೀಸ(2)12

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ 31.08.2013

## ಸುತ್ತೋಲೆ

ವಿಷಯ: ಗ್ರಾಮೀಣ ನೀರು ಮತ್ತು ನೈರ್ಮಲ್ಯ ಸಲುವಾಗಿ VWSSC ಸಮಿತಿಗಳನ್ನು ರಚಿಸುವ ಕುರಿತು.

ಉಲ್ಲೇಖ:
1. ಭಾರತ ಸರ್ಕಾರದ NRDWP ಮಾರ್ಗಸೂಚಿಗಳ ದಿನಾಂಕ:23.04.2010.
2. ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪ/37/ಗ್ರಾನೀಸ (2)2013 ದಿ:29.08.2013.
3. ಸರ್ಕಾರದ ನಡವಳಿ ಸಂಖ್ಯೆ:ಗ್ರಾಅಪ/843/ಗ್ರಾನೀಸ/2003 ದಿ:01.10.2005.

---

ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಸರ್ಕಾರವು ರಾಜ್ಯ ಮತ್ತು ಕೇಂದ್ರ ವಲಯಗಳಡಿ ಪ್ರತಿ ವರ್ಷ ಅತ್ಯಧಿಕ ಬಂಡವಾಳ ಹೂಡಿಕೆ ಮಾಡಿ ಕುಡಿಯುವ ನೀರು ಮತ್ತು ನೈರ್ಮಲ್ಯ ಸಲುವಾಗಿನ ಸಂಪನ್ಮೂಲಗಳನ್ನು ಸ್ಥಾಪಿಸಲಾಗಿದೆ. ಆದರೆ, ಅವುಗಳ ನಂತರದ ಸದ್ಬಳಕೆ ಮತ್ತು ಸಮರ್ಪಕ ಕಾರ್ಯಾಚರಣೆ ಮತ್ತು ನಿರ್ವಹಣೆ ಅಷ್ಟೇ ಪ್ರಮುಖ್ಯತಾ ವಿಷಯವಾಗಿದೆ. ಈ ಸಲುವಾಗಿ ಕೇಂದ್ರ ಸರ್ಕಾರವು ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಮತ್ತು ಆರೋಗ್ಯಕ್ಕೆ ಸಂಬಂಧಿಸಿದಂತೆ ಗ್ರಾಮ ನೀರು ಸರಬರಾಜು ಮತ್ತು ನೈರ್ಮಲ್ಯ ಸಮಿತಿ (VWSSCs) ರಚನೆ ಮಾಡಲು ಸೂಚಿಸಿದೆ. ಈ ಪ್ರಸ್ತಾಪವನ್ನು ನಮ್ಮ ರಾಜ್ಯದ ಗ್ರಾಮೀಣ ನೀರು ಮತ್ತು ನೈರ್ಮಲ್ಯ ಯೋಜನೆಗಳು ಯಶಸ್ವಿಯಾಗಿ ಪೂರ್ಣಗೊಂಡು ಫಲಪ್ರದವಾಗಬೇಕೆಂಬ ದೂರದೃಷ್ಟಿ ಮತ್ತು ಮಹತ್ವಾಕಾಂಕ್ಷೆಯಿಂದ ಮಾಡಲಾಗಿದೆ. ಇದರಿಂದ, ಗ್ರಾಮ ಸ್ವರಾಜ್ಯದ ಪರಿಕಲ್ಪನೆಯ ತತ್ವವನ್ನು ಅಕ್ಷರಶ: ಪಾಲಿಸಿದಂತೆ ಆಗುತ್ತದೆ.

ಮೇಲ್ಕಂಡ ಹಿನ್ನೆಲೆಯಲ್ಲಿ ಉಲ್ಲೇಖಿತ ಸರ್ಕಾರದ ನಡವಳಿ ಸಂಖ್ಯೆ:ಗ್ರಾಅಪ/843/ಗ್ರಾನೀಸ/2003 ದಿನಾಂಕ:1.10.2005ರಂತೆ ಕರ್ನಾಟಕ ಪಂಚಾಯತ್ ರಾಜ್ ಅಧಿಸೂಚನೆ 1993ರ ಸೆಕ್ಷನ್ 61(A)ರನ್ವಯ VWSSCsಗಳನ್ನು ಜಾಗ್ರತೆಯಾಗಿ ರಚಿಸಿ, ಅವುಗಳ ಅಸ್ತಿತ್ವ ಪರಿಣಾಮಕಾರಿಯಾಗಿ ಫಲಪ್ರದವಾಗುವಂತೆ ನೋಡಿಕೊಳ್ಳುವ ಸಂಬಂಧ, ಸವಿಸ್ತಾರವಾದ ರೂಪುರೇಷೆಗಳನ್ನು ಅನುಬಂಧ-1ರಲ್ಲಿ ಈಗಾಗಲೇ ಉಲ್ಲೇಖ (2)ರ ಸುತ್ತೋಲೆಯಲ್ಲಿ ನೀಡಲಾಗಿದೆ. ಅದರನ್ವಯ ಎಲ್ಲಾ ಜಿಲ್ಲಾ / ತಾಲ್ಲೂಕು ಮತ್ತು ಗ್ರಾಮ ಪಂಚಾಯಿತಿಗಳು ಕಾರ್ಯೋನ್ಮುಖರಾಗಿ ತತ್ಸಂಬಂಧ ಕೈಗೊಂಡ ಅನುಪಾಲನಾ ಕ್ರಮಗಳನ್ನು IMISನಲ್ಲಿರುವ MDIನಲ್ಲಿ ಪ್ರತಿ ಮೂರು ತಿಂಗಳಿಗೊಮ್ಮೆ ದಾಖಲಿಸಬೇಕು. ಇದನ್ನು ಆಧರಿಸಿ, ಕೇಂದ್ರ ಸರ್ಕಾರಕ್ಕೆ ರಾಜ್ಯ ಸರ್ಕಾರವು ಪ್ರತಿ ವರ್ಷ ನವೆಂಬರ್ ಮಾಹೆಯಲ್ಲಿ ರಾಜ್ಯದ ಚಿತ್ರಣವನ್ನು ಧೃಡೀಕೃತ ದಾಖಲೆಗಳೊಂದಿಗೆ ನಿರೀಕ್ಷಿತ ಪ್ರೋತ್ಸಾಹ ಧನ (Incentive Fund) ಪಡೆಯಲು ಪ್ರಸ್ತಾಪ ಕಳುಹಿಸಬೇಕಾಗಿದೆ. ಆದ್ದರಿಂದ, ಈ ಕುರಿತಂತೆ, ರಾಜ್ಯದ ಎಲ್ಲಾ ಪಂಚಾಯತ್ ರಾಜ್ ಸಂಸ್ಥೆಗಳು ಜವಾಬ್ದಾರಿಯಿಂದ ಮತ್ತು ಆಸಕ್ತಿಯಿಂದ ಅಗತ್ಯ ಕ್ರಮವಹಿಸುವಂತೆ ಕೋರಿದೆ.

(ರಾಮಕೃಷ್ಣ)
ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ರಾಜ್ಯದ ಎಲ್ಲಾ (30) ಜಿಲ್ಲಾ ಪಂಚಾಯತ್‌ಗಳ ಅಧ್ಯಕ್ಷರುಗಳು ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿ, ನಂ.55, 4ನೇ ಮಹಡಿ, ಅಭಯ ಸಂಕೀರ್ಣ, ಕಾಂಪ್ಲೆಕ್ಸ್, ರಿಸಲ್ದಾರ್ ರಸ್ತೆ, ಶೇಷಾದ್ರಿಪುರಂ,- ಬೆಂಗಳೂರು-20.
3. ರಾಜ್ಯದ ಎಲ್ಲಾ (8) ಅಧೀಕ್ಷಕ ಅಭಿಯಂತರರು, ಪಂಚಾಯತ್‌ರಾಜ್ ಇಂಜಿನಿಯರಿಂಗ್ ವೃತ್ತ ಕಛೇರಿಗಳು.
4. ರಾಜ್ಯದ ಎಲ್ಲಾ (38) ಕಾರ್ಯಪಾಲಕ ಇಂಜಿನಿಯರ್‌ಗಳು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳು.
5. ರಾಜ್ಯದ ಎಲ್ಲಾ (176) ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಗಳು.

ಪ್ರತಿ:

1. ಮಾನ್ಯ ಸಚಿವರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ. ವಿಧಾನಸೌಧ ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ ಹಾಗೂ ಸರ್ಕಾರದ ಕಾರ್ಯದರ್ಶಿ (ಪಂ.ರಾಜ್) ಗ್ರಾಅಪಂ.ರಾಜ್ ಇಲಾಖೆ ಮತ್ತು ಎಲ್ಲಾ ನಿರ್ದೇಶಕರುಗಳು, ಆಂತರಿಕ ಆರ್ಥಿಕ ಸಲಹೆಗಾರರು, ಇವರ ಆಪ್ತ ಕಾರ್ಯದರ್ಶಿಗಳು / ಆಪ್ತ ಸಹಾಯಕರುಗಳು.
3. ನಿರ್ದೇಶಕರು, SWSM ಹಾಗೂ ಸರ್ಕಾರದ ಪದನಿಮಿತ್ತ ಅಪರ ಕಾರ್ಯದರ್ಶಿ ಗ್ರಾಅಪಂ.ರಾಜ್ ಇಲಾಖೆ, ಕಾವೇರಿ ಭವನ, ಬೆಂಗಳೂರು-9.
4. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣ ಅಭಿವೃದ್ಧಿ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು-570011